**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಕಡೂರು**

**ಸಿಸಿ. ನಂ.35/2023**

ಫಿರ್ಯಾದಿ : ಕಡೂರು ಪೊಲೀಸ್ ಠಾಣೆ

ವಿರುದ್ದ

ಆರೋಪಿತರು : ಎಂ.ಎನ್.ತಿಮ್ಮಯ್ಯ ಬಿನ್ ಎಂ.ಎ.ನಾಣಯ್ಯ, ಸುಮಾರು 24 ವರ್ಷ, ಕಾಫಿ ಟ್ರೇಡಿಂಗ್, ವ್ಯಾಪಾರ, ವಾಸ : ನಂ.13, ಕೆ.ಹೆಚ್.ಬಿ. ಅಂಧ ಮಕ್ಕಳ ಶಾಲೆ ಹಿಂಭಾಗ, ರತ್ನಗಿರಿ ಬೋರೆ, ಚಿಕ್ಕಮಗಳೂರು ಜಿಲ್ಲೆ.

**ಆರೋಪಣೆ**

ಶ್ರೀಮತಿ ಸವಿತರಾಣಿ ಹೆಚ್.ವಿ., ಬಿ.ಎ.ಎಲ್., ಎಲ್.ಎಲ್.ಬಿ, ಪ್ರಭಾರ ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ಗಳು, ಕಡೂರು ಆದ ನಾನು ಈ ಮೂಲಕ ಕೆಳಕಂಡಂತೆ ಆಪಾದಿತರಾದ ನಿಮ್ಮ ಮೇಲೆ ಹೊರಿಸುವ ಆರೋಪಣೆ.

ದಿನಾಂಕ 02.06.2022 ರಂದು ರಾತ್ರಿ 9-30 ಗಂಟೆ ಸಮಯದಲ್ಲಿ ಕಡೂರು ಠಾಣಾ ಸರಹದ್ದಿನ ರಾಮನಹಳ್ಳಿ ಗೇಟ್ ಎದುರು ಹಾದು ಹೋಗಿರುವ ಕಡೂರು -ಸಖರಾಯಪಟ್ಟಣ ನಡುವಿನ ಎನ್.ಹೆಚ್-173 ಟಾರು ರಸ್ತೆಯಲ್ಲಿ ಚಾಸಾ-1 ಮೊಹಮದ್ ಬಷೀರ್ ರವರ ಮಗ ಮಹಮ್ಮದ್ ಶಾರಿಕ್ ರವರು ಚಾಸಾ-1 ರವರ ಬಾಬ್ತು ಕೆಎ-66/ಜೆ-1857 ರ ದ್ವಿ ಚಕ್ರ ವಾಹನದಲ್ಲಿ ಚಾಸಾ-5 ಸಲ್ಮಾನ್ ರವರನ್ನು ಬೈಕಿನ ಹಿಂಬದಿಯಲ್ಲಿ ಕೂರಿಸಿಕೊಂಡು ಕಡೂರು ಕಡೆಯಿಂದ ಸಖರಾಯಪಟ್ಟಣ ಕಡೆಗೆ ಹೋಗಲೆಂದು ರಸ್ತೆಯ ಎಡಬದಿಯಲ್ಲಿ ಬೈಕ್ ಚಾಲನೆ ಮಾಡಿಕೊಂಡು ಹೋಗುತ್ತಿರುವಾಗ, ಆರೋಪಿಯಾದ ನೀವು ಚಾಸಾ-13 ನಾಣಯ್ಯ ರವರ ಬಾಬ್ತು ಕೆಎ-18/ಎನ್-6878 ರ ಕಾರನ್ನು ಕಡೂರು ಕಡೆಯಿಂದ ಅತಿವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ನಿಮ್ಮ ಮುಂಭಾಗದಲ್ಲಿ ಹೋಗುತ್ತಿದ್ದ ಮಹಮ್ಮದ್ ಶಾರಿಕ್ ರವರ ಮೋಟಾರ್ ಬೈಕಿಗೆ ಹಿಂಬದಿಯಿಂದ ಡಿಕ್ಕಿಪಡಿಸಿ ಅಪಘಾತವನ್ನುಂಟು ಮಾಡಿರುತ್ತೀರಿ. ಆದಕಾರಣ ಆರೋಪಿಯಾದ ನೀವು **ಭಾರತೀಯ ದಂಡ ಸಂಹಿತೆ ಕಲಂ 279** ರ ಅಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೇಯ ಒಳಗೆ ಮಾಡಿರುವಿರಿ.

ಎರಡನೆಯದಾಗಿ, ಮೇಲ್ಕಂಡ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಚಾಸಾ-13 ನಾಣಯ್ಯ ರವರ ಬಾಬ್ತು ಕೆಎ-18/ಎನ್-6878 ರ ಕಾರನ್ನು ಕಡೂರು ಕಡೆಯಿಂದ ಅತಿವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ನಿಮ್ಮ ಮುಂಭಾಗದಲ್ಲಿ ಹೋಗುತ್ತಿದ್ದ ಮಹಮ್ಮದ್ ಶಾರಿಕ್ ರವರ ಮೋಟಾರ್ ಬೈಕಿಗೆ ಹಿಂಬದಿಯಿಂದ ಡಿಕ್ಕಿಪಡಿಸಿ ಅಪಘಾತವನ್ನುಂಟು ಮಾಡಿದ ಪರಿಣಾಮ, ಮೋಟಾರು ಬೈಕಿನಲ್ಲಿದ್ದವರು ಬೈಕಿನಿಂದ ಮೇಲಕ್ಕೆ ಹಾರಿ ಚಾಸಾ-5 ರವರು ಕಾರಿನ

ಮೇಲೆ ಬಿದ್ದ ಪರಿಣಾಮ, ಚಾಸಾ-5 ರವರ ತಲೆಗೆ ಹಾಗೂ ಮುಖಕ್ಕೆ ತೀವ್ರ ಸ್ವರೂಪದ ಗಾಯಗಳಾಗಿರುತ್ತದೆ. ಆದಕಾರಣ, ನೀವು **ಭಾರತೀಯ ದಂಡ ಸಂಹಿತೆ ಕಲಂ 338** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೇಯ ಒಳಗೆ ಮಾಡಿರುವಿರಿ.

ಮೂರನೆಯದಾಗಿ, ಮೇಲ್ಕಂಡ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಚಾಸಾ-13 ನಾಣಯ್ಯ ರವರ ಬಾಬ್ತು ಕೆಎ-18/ಎನ್-6878 ರ ಕಾರನ್ನು ಕಡೂರು ಕಡೆಯಿಂದ ಅತಿವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ನಿಮ್ಮ ಮುಂಭಾಗದಲ್ಲಿ ಹೋಗುತ್ತಿದ್ದ ಮಹಮ್ಮದ್ ಶಾರಿಕ್ ರವರ ಮೋಟಾರ್ ಬೈಕಿಗೆ ಹಿಂಬದಿಯಿಂದ ಡಿಕ್ಕಿಪಡಿಸಿ ಅಪಘಾತವನ್ನುಂಟು ಮಾಡಿದ ಪರಿಣಾಮ, ಮೋಟಾರು ಬೈಕಿನಲ್ಲಿದ್ದವರು ಬೈಕಿನಿಂದ ಮೇಲಕ್ಕೆ ಹಾರಿ, ಮಹಮದ್ ಶಾರಿಕ್ ನು ರಸ್ತೆಯ ಮೇಲೆ ಬಿದ್ದ ಪರಿಣಾಮ, ಅವರ ತಲೆಗೆ ತೀವ್ರ ಸ್ವರೂಪದ ಗಾಯಗಳಾಗಿ ಸ್ಥಳದಲ್ಲಿಯೇ ಮೃತಪಡಲು ಕಾರಣರಾಗಿರುತ್ತೀರಿ. ಆದಕಾರಣ, ನೀವು **ಭಾರತೀಯ ದಂಡ ಸಂಹಿತೆ ಕಲಂ 304(ಎ)** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೇಯ ಒಳಗೆ ಮಾಡಿರುವಿರಿ.

ಕೊನೆಯದಾಗಿ, ಮೇಲ್ಕಂಡ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಯಾದ ನೀವು ಸದರಿ ಅಪಘಾತವಾನ್ನುಂಟು ಮಾಡಿ, ಅಪಘಾತದ ವಿಚಾರವನ್ನು ಹತ್ತಿರದ ಪೋಲೀಸ್ ಠಾಣೆಗೆ ತಿಳಿಸದೇ ಹಾಗೂ ಗಾಯಾಳುವನ್ನು ಆಸ್ಪತ್ರೆಗೆ ಸೇರಿಸದೇ ಸ್ಥಳದಿಂದ ಪರಾರಿಯಾಗಿರುತ್ತೀರಿ. ಆದಕಾರಣ ಆರೋಪಿಯಾದ ನೀವು ಮೋಟಾರು ವಾಹನ ಕಾಯ್ದೆ **187** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೇಯ ಒಳಗೆ ಮಾಡಿರುವಿರಿ.

ಪ್ರಶ್ನೆಃ 1- ನಿಮ್ಮ ಮೇಲಿನ ಆಪಾದನೆಯ ಸಾರವನ್ನು ಓದಿ ವಿವರಿಸಿ ಹೇಳಿದಾಗ ನಿಮಗೆ ಅರ್ಥವಾಯಿತೇ ?

ಉತ್ತರಃ ಹೌದು.

ಪ್ರಶ್ನೆಃ 2- ನೀವು ನಿಮ್ಮ ತಪ್ಪನ್ನು ಒಪ್ಪಿಕೊಳ್ಳುವಿರೋ ಅಥವಾ ನಿಮ್ಮ ಪರ ಪ್ರತಿರಕ್ಷಣೆ ಇದೆಯೇ?

ಉತ್ತರಃ ನಾವು ಯಾವುದೇ ತಪ್ಪು ಮಾಡಿರುವುದಿಲ್ಲ.

ಆದ್ದರಿಂದ ನೀವು ಮೇಲ್ಕಂಡ ದಂಡನೀಯ ಅಪರಾಧಗಳ ಮೇಲೆ ಈ ನ್ಯಾಯಾಲಯದಿಂದ ವಿಚಾರಣೆಗೆ ಒಳಪಡತಕ್ಕದ್ದೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ.

ದಿನಾಂಕಃ 24.09.2024

-ಸಹಿ-
(ಶ್ರೀಮತಿ ಸವಿತರಾಣಿ ಹೆಚ್.ವಿ)
ಪ್ರಭಾರ ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ., ಕಡೂರು.